# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಅಯುಬ ಮನಸೂರಸಾಬ ಬಾದಾಮಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮತ್ತು ಶ್ರೀ ಗುಡದಪ್ಪ ಬಿನ್ ಹಣಮಂತ ಕಟಬರ್, ಕಾರ್ಯದರ್ಶಿ, ಕೋಲ್ಹಾರ ಗ್ರಾಮ ಪಂಚಾಯತಿ, ಬಸವನಬಾಗೇವಾಡಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಕುರಿತು.

ಓದಲಾಗಿದೆ:

1. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಅ.ಸ.ಪ.ಸಂ. Compt/UPLOK/BGM-81/2017/PP, ದಿನಾಂಕ: 28.11.2018.
2. ಸರ್ಕಾರದ ಸಮಸಂಖ್ಯೆಯ ಪತ್ರದ ದಿನಾಂಕ:16.01.2019.

ಪ್ರಸ್ತಾವನೆ:

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು ದಿನಾಂಕ: 22.11.2018 ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಮಾನ್ಯ ಅಪರ ಪೊಲೀಸ್ ಮಹಾನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ಪೊಲೀಸ್ ನಿರೀಕ್ಷಕರು, ಕರ್ನಾಟಕ ಲೋಕಾಯುಕ್ತ, ವಿಜಯಪುರ (ಇನ್ನು ಮುಂದೆ 'ತನಿಖಾಧಿಕಾರಿ' ಎಂದು ಕರೆಯಲ್ಪಡುತ್ತಾರೆ) ಇವರ ತನಿಖಾ ವರದಿ ಮತ್ತು ಸಂಬಂಧಿಸಿದ ದಾಖಲೆಗಳೊಂದಿಗೆ ಸಲ್ಲಿಸಿದ ವರದಿಯಲ್ಲಿ 1) ಅಯುಬ ಮನಸೂರಸಾಬ ಬಾದಾಮಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ 2) ಶ್ರೀ ಗುಡದಪ್ಪ ಬಿನ್ ಹಣಮಂತ ಕಟಬರ್, ಕಾರ್ಯದರ್ಶಿ 3) ಶ್ರೀ ಮಲ್ಲಪ್ಪ ಬಿನ್ ಬಸಲಿಂಗಪ್ಪ ಬ್ಯಾಲ್ಯಾಳ, ಬಿಲ್‌ಕಲೆಕ್ಟರ್ 4) ಶ್ರೀಮತಿ ನಿಂಗಮ್ಮ ಬಿನ್ ಭೀಮಪ್ಪ ಬಾರಕೇರ, ಸಿಪಾಯಿ, ಕೋಲ್ಹಾರ ಗ್ರಾಮ ಪಂಚಾಯತಿ, ಬಸವನಬಾಗೇವಾಡಿ ತಾಲ್ಲೂಕು, ವಿಜಯಪುರ ಜಿಲ್ಲೆ (ಇನ್ನು ಮುಂದೆ '1 ರಿಂದ 4ನೇ ಎದುರುದಾರರು' ಎಂದು ಕರೆಯಲ್ಪಡುತ್ತಾರೆ) ಇವರು ಸರ್ಕಾರಿ/ಸಾರ್ವಜನಿಕ ನೌಕರರಾಗಿದ್ದು ದುರ್ನಡತೆ ಎಸಗಿರುತ್ತಾರೆಂದು ಮೇಲ್ನೋಟಕ್ಕೆ ಕಂಡು ಬಂದಿದ್ದರಿಂದ ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 7(2) ರನ್ವಯ ಗೌರವಾನ್ವಿತ ಉಪಲೋಕಾಯುಕ್ತರವರು ತನಿಖೆ ಕೈಗೊಂಡಿರುತ್ತಾರೆ.

ತನಿಖಾ ಅವಧಿಯಲ್ಲಿ 1 ಮತ್ತು 2ನೇ ಎದುರುದಾರರ ನಿರ್ದೇಶನದ ಮೇರೆಗೆ 3 ಮತ್ತು 4ನೇ ಎದುರುದಾರರು ಇಂದಿರಾ ಆವಾಸ್ ಯೋಜನೆಯ ಫಲಾನುಭವಿಗಳಿಗೆ ಚೆಕ್ ವಿತರಿಸಲು ಲಂಚದ ಹಣ ಪಡೆದು ಗ್ರಾಮ ಪಂಚಾಯತಿ ಕಾರ್ಯಾಲಯದ ಅಲ್ಮೇರಾದಲ್ಲಿ ಸಂಗ್ರಹಿಸಿರುವ ಒಟ್ಟು ರೂ 42,005/-ಗಳನ್ನು ಜಪ್ತಿ ಮಾಡಿದ್ದು, ತನಿಖಾಧಿಕಾರಿಗಳು ಸಂಗ್ರಹಿಸಿದ ಆಧಾರಗಳಾದ ಮಹಜರ್ ಮತ್ತು ಸಾಕ್ಷಿದಾರರ ಹೇಳಿಕೆಗಳ ಅಂಶಗಳಿಂದ ಎದುರುದಾರರು ಕರ್ತವ್ಯಲೋಪ ಎಸಗಿರುವುದು ಮೇಲ್ನೋಟಕ್ಕೆ ಕಂಡುಬಂದಿರುತ್ತದೆ.

ಆದ್ದರಿಂದ 1 ರಿಂದ 4ನೇ ಎದುರುದಾರರು ಸಾರ್ವಜನಿಕ/ಸರ್ಕಾರಿ ನೌಕರರಾಗಿದ್ದು, ಅವರ ಕರ್ತವ್ಯ ಪರಿಪಾಲನೆಯಲ್ಲಿ ನಿಷ್ಠೆಯನ್ನು ತೋರದೇ ಕರ್ತವ್ಯಲೋಪವೆಸಗಿ, ದುರ್ವರ್ತನೆ ತೋರಿಸಿ, ಸಾರ್ವಜನಿಕ/ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿರುವುದು ಮೇಲ್ನೋಟಕ್ಕೆ ಕಂಡುಬಂದಿರುವುದರಿಂದ ಕರ್ನಾಟಕ ನಾಗರೀಕ ಸೇವೆ (ನಡತೆ) ನಿಯಮ, 1966 ರ ನಿಯಮಗಳು 3(1)(i) ಮತ್ತು (iii) ರನ್ವಯ ಶಿಸ್ತು ಕ್ರಮಕ್ಕೆ ಬಾಧ್ಯರಾಗಿರುವುದು ಕಂಡು ಬಂದಿರುತ್ತದೆ.

ಆದುದರಿಂದ 1ನೇ ಎಧುರುದಾರರಾದ ಅಯುಬ ಮನಸೂರಸಾಬ ಬಾದಾಮಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕೋಲ್ಹಾರ ಗ್ರಾಮ ಪಂಚಾಯತಿ, ಬಸವನಬಾಗೇವಾಡಿ ತಾಲ್ಲೂಕು, ವಿಜಯಪುರ ಜಿಲ್ಲೆ (ನಿವೃತ್ತಿ ದಿನಾಂಕ: 31.07.2025), 2ನೇ ಎದುರುದಾರರಾದ ಶ್ರೀ ಗುಡದಪ್ಪ ಬಿನ್ ಹಣಮಂತ ಕಟಬರ್, ಕಾರ್ಯದರ್ಶಿ, ಕೋಲ್ಹಾರ ಗ್ರಾಮ ಪಂಚಾಯತಿ, ಬಸವನಬಾಗೇವಾಡಿ ತಾಲ್ಲೂಕು, ವಿಜಯಪುರ ಜಿಲ್ಲೆ (ನಿವೃತ್ತಿ ದಿನಾಂಕ: 31.05.2015), 3ನೇ ಎದುರುದಾರರಾದ ಶ್ರೀ ಮಲ್ಲಪ್ಪ ಬಿನ್ ಬಸಲಿಂಗಪ್ಪ ಬ್ಯಾಲ್ಯಾಳ, ಬಿಲ್‌ಕಲೆಕ್ಟರ್, ಕೋಲ್ಹಾರ ಗ್ರಾಮ ಪಂಚಾಯತಿ, ಬಸವನಬಾಗೇವಾಡಿ ತಾಲ್ಲೂಕು, ವಿಜಯಪುರ ಜಿಲ್ಲೆ (ನಿವೃತ್ತಿ ದಿನಾಂಕ: 31.07.2037), 4ನೇ ಎದುರುದಾರರಾದ ಶ್ರೀಮತಿ ನಿಂಗಮ್ಮ ಬಿನ್ ಭೀಮಪ್ಪ ಬಾರಕೇರ, ಸಿಪಾಯಿ, ಕೋಲ್ಹಾರ ಗ್ರಾಮ ಪಂಚಾಯತಿ, ಬಸವನಬಾಗೇವಾಡಿ ತಾಲ್ಲೂಕು, ವಿಜಯಪುರ ಜಿಲ್ಲೆ (ನಿವೃತ್ತಿ ದಿನಾಂಕ: 31.07.2043) ರವರುಗಳ ವಿರುದ್ಧ ಶಿಸ್ತು ನಡವಳಿಕೆ ಹೂಡಲು ಮತ್ತು ಹಾಗೆಯೇ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿರ್ಬಂಧ ಮತ್ತು ಮೇಲ್ಮನವಿ) ನಿಯಮಗಳು, 1957 ರ ನಿಯಮ 14-ಎ ರ ಅಡಿಯಲ್ಲಿ ಹಾಗೂ ಕೆ.ಸಿ.ಎಸ್.ಆರ್ 214(2)(ಬಿ)(i) ರಡಿಯಲ್ಲಿ 2ನೇ ಎದುರುದಾರರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಹಾಗೂ ಈ ಪ್ರಾಧಿಕಾರಕ್ಕೆ ಒಪ್ಪಿಸುವಂತೆ ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 12(3) ರನ್ವಯ ಪ್ರದತ್ತವಾದ ಅಧಿಕಾರದಡಿ ಶಿಫಾರಸ್ಸು ಮಾಡಿರುತ್ತಾರೆ.

......2

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ, ಶ್ರೀ ಮಲ್ಲಪ್ಪ ಬಿನ್ ಬಸಲಿಂಗಪ್ಪ ಬ್ಯಾಲ್ಯಾಳ, ಬಿಲ್‌ಕಲೆಕ್ಟರ್ ಮತ್ತು ಶ್ರೀಮತಿ ನಿಂಗಮ್ಮ ಬಿನ್ ಭೀಮಪ್ಪ ಬಾರಕೇರ, ಸಿಪಾಯಿ, ಕೋಲ್ಹಾರ ಗ್ರಾಮ ಪಂಚಾಯತಿ, ಬಸವನಬಾಗೇವಾಡಿ ತಾಲ್ಲೂಕು, ವಿಜಯಪುರ ಜಿಲ್ಲೆ ರವರು ಗ್ರಾಮ ಪಂಚಾಯಿತಿ ನೌಕರರಾಗಿದ್ದು, ಸರ್ಕಾರಿ ನೌಕರರಾಗಿರುವುದಿಲ್ಲ. ಆದ್ದರಿಂದ ಸದರಿಯವರ ವಿರುದ್ಧ ಕ್ರಮವಹಿಸುವ ಸಂಬಂಧ ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು, ವಿಜಯಪುರ ಜಿಲ್ಲಾ ಪಂಚಾಯತಿ ರವರಿಗೆ ಮೇಲೆ ಓದಲಾದ (2) ರಲ್ಲಿ ಪತ್ರ ಬರೆಯಲಾಗಿದೆ.

ಹಾಗೂ ಶ್ರೀ ಅಯುಬ ಮನಸೂರಸಾಬ ಬಾದಾಮಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕೋಲ್ಹಾರ ಗ್ರಾಮ ಪಂಚಾಯತಿ, ಬಸವನಬಾಗೇವಾಡಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14-ಎ ರನ್ವಯ ಹಾಗೂ ಶ್ರೀ ಗುಡದಪ್ಪ ಬಿನ್ ಹಣಮಂತ ಕಟಬರ್, ಕಾರ್ಯದರ್ಶಿ, ಕೋಲ್ಹಾರ ಗ್ರಾಮ ಪಂಚಾಯತಿ, ಬಸವನಬಾಗೇವಾಡಿ ತಾಲ್ಲೂಕು, ವಿಜಯಪುರ ಜಿಲ್ಲೆ ರವರು ನಿವೃತ್ತಿ ಹೊಂದಿರುವುದರಿಂದ ಸದರಿಯವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ ನಿಯಮಗಳು 1957 ರ ನಿಯಮ 214(2)(ಬಿ)(i) ರನ್ವಯ ಇಲಾಖಾ ವಿಚಾರಣೆಗೆ ಅನುಮತಿ ನೀಡಿ, ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 549 ಗ್ರಾಪಂಕಾ 2018, ಬೆಂಗಳೂರು, ದಿನಾಂಕ: 16.01.2019**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಅಯುಬ ಮನಸೂರಸಾಬ ಬಾದಾಮಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕೋಲ್ಹಾರ ಗ್ರಾಮ ಪಂಚಾಯತಿ, ಬಸವನ ಬಾಗೇವಾಡಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14-ಎ ರನ್ವಯ ಹಾಗೂ ಶ್ರೀ ಗುಡದಪ್ಪ ಬಿನ್ ಹಣಮಂತ ಕಟಬರ್, ಕಾರ್ಯದರ್ಶಿ, ಕೋಲ್ಹಾರ ಗ್ರಾಮ ಪಂಚಾಯತಿ, ಬಸವನಬಾಗೇವಾಡಿ ತಾಲ್ಲೂಕು, ವಿಜಯಪುರ ಜಿಲ್ಲೆ ರವರು ನಿವೃತ್ತಿ ಹೊಂದಿರುವುದರಿಂದ ಸದರಿಯವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ ನಿಯಮಗಳು 1957 ರ ನಿಯಮ 214(2)(ಬಿ)(i) ರನ್ವಯ ಇಲಾಖಾ ವಿಚಾರಣೆಗೆ ಅನುಮತಿ ನೀಡಿ, ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ-8 ರ ಅಡಿ ಅಥವಾ ಕರ್ನಾಟಕ ನಾಗರೀಕ ಸೇವಾ ನಿಯಮಗಳು 1957 ರ ನಿಯಮ 214 ರಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡವೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

17/1

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
   (ಮೇಲೆ ಓದಲಾದ ಪತ್ರದಲ್ಲಿ ಸಲ್ಲಿಸಲಾದ ಮೂಲ ದಾಖಲಾತಿಗಳನ್ನು ಪುಟ ಸಂಖ್ಯೆ 1 ರಿಂದ 162 ರವರೆಗೆ ಇದರೊಂದಿಗೆ ಲಗತ್ತಿಸಿ ಕಳುಹಿಸಲಾಗಿದೆ)
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ವಿಜಯಪುರ ಜಿಲ್ಲಾ ಪಂಚಾಯತಿ, ವಿಜಯಪುರ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಬಸವನ ಬಾಗೇವಾಡಿ, ವಿಜಯಪುರ ಜಿಲ್ಲೆ. (ಸದರಿ ನೌಕರರಿಗೆ ಈ ಆದೇಶದ ಪ್ರತಿಯನ್ನು ತಲುಪಿಸಿ, ಸರ್ಕಾರಕ್ಕೆ ಸ್ವೀಕೃತಿ ಸಲ್ಲಿಸುವುದು.)
6. ಶ್ರೀ ಅಯುಬ ಮನಸೂರಸಾಬ ಬಾದಾಮಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕೋಲ್ಹಾರ ಗ್ರಾಮ ಪಂಚಾಯತಿ, ಬಸವನ ಬಾಗೇವಾಡಿ ತಾಲ್ಲೂಕು, ವಿಜಯಪುರ ಜಿಲ್ಲೆ.
7. ಶ್ರೀ ಗುಡದಪ್ಪ ಬಿನ್ ಹಣಮಂತ ಕಟಬರ್, ಕಾರ್ಯದರ್ಶಿ, ಕೋಲ್ಹಾರ ಗ್ರಾಮ ಪಂಚಾಯತಿ, ಬಸವನಬಾಗೇವಾಡಿ ತಾಲ್ಲೂಕು, ವಿಜಯಪುರ ಜಿಲ್ಲೆ.
8. ಗಣಕಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.